ಖಂಡ 1 ಇತ್ಯಾದಿ

ಅಧ್ಯಕ್ಷರು : ಪ್ರಸ್ತಾವ ಏನೆಂದರೆ,

"ಮೊದಲನೆಯ ಖಂಡ ದೀರ್ಘ ಶೀರ್ಷಿಕೆ, ಪ್ರಸ್ತಾವನೆ ಹಾಗೂ ಅಧಿನಿಯಮಗೊಳಿಸುವ ಸೂತ್ರ ಸಂಹಿತೆ ವಿಧೇಯಕದ ಭಾಗವಾಗಿರುತ್ತದೆ"

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು

(ಮೊದಲನೆಯ ಖಂಡ ದೀರ್ಘ ಶೀರ್ಷಿಕೆ ಪ್ರಸ್ತಾವನೆ ಹಾಗೂ ಅಧಿನಿಯಮಗೊಳಿಸುವ ಸೂತ್ರ ಸಂಹಿತೆಗಳನ್ನು ವಿಧೇಯಕಕ್ಕೆ ಸೇರಿಸಲ್ಪಟ್ಟಿತು).

ಪ್ರಸ್ತಾವದ ಅಂಗೀಕಾರ

ಶ್ರೀ ಬಿ. ನಾಗರಾಜಶೆಟ್ಟಿ (ಬಂದರು, ಮೀನುಗಾರಿಕೆ ಮತ್ತು ಮುಜರಾಯಿ ಸಚಿವರು): ಮಾನ್ಯ ಅಧ್ಯಕ್ಷರೆ, "2005ರ ಮೈಸೂರು (ಧಾರ್ಮಿಕ ಮತ್ತು ಧರ್ಮಾದಾಯ) ಇನಾಂಗಳ ರದ್ದತಿ (ಕರ್ನಾಟಕ ತಿದ್ದುಪಡಿ) ವಿಧೇಯಕವನ್ನು ಅಂಗೀಕರಿಸಬೇಕೆಂದು ಕೋರುತ್ತೇನೆ."

ಅಧ್ಯಕ್ಷರು: ಪ್ರಸ್ತಾವ ಏನೆಂದರೆ 2005ರ ಮೈಸೂರು (ಧಾರ್ಮಿಕ ಮತ್ತು ಧರ್ಮದಾಯ) ಇನಾಂಗಳ ರದ್ದತಿ (ಕರ್ನಾಟಕ ತಿದ್ದುಪಡಿ) ವಿಧೇಯಕವನ್ನು ಅಂಗೀಕರಿಸುವುದು.

*** ಪ್ರಸ್ತಾವ ಅಂಗೀಕರಿಸಲ್ಪಟ್ಟಿತು ಮತ್ತು ವಿಧೇಯಕಕ್ಕೆ ಒಪ್ಪಿಗೆ ನೀಡಲಾಯಿತು**

(ಇ) ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ (ಎರಡನೇ ತಿದ್ದುಪಡಿ) ವಿಧೇಯಕ, 2005 ಪರ್ಯಾಲೋಚನಾ ಪ್ರಸ್ತಾವ

ಶ್ರೀ ಹೆಚ್. ಡಿ. ಕುಮಾರಸ್ವಾಮಿ (ಮುಖ್ಯಮಂತ್ರಿಗಳು) : ಮಾನ್ಯ ಅಧ್ಯಕ್ಷರೆ, "2005ರ ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ (ಎರಡನೇ ತಿದ್ದುಪಡಿ) ವಿಧೇಯಕವನ್ನು ಪರ್ಯಾಲೋಚಿಸಬೇಕೆಂದು ಕೋರುತ್ತೇನೆ."

ಪ್ರಸ್ತಾವ ಮಂಡಿಸಲಾಯಿತು

ಶ್ರೀ ಹೆಚ್. ಡಿ. ಕುಮಾರಸ್ವಾಮಿ : ಮಾನ್ಯ ಅಧ್ಯಕ್ಷರೆ, ಹೈಟೆಕ್ ನಗರ ವಿನ್ಯಾಸ ರೂಪಿಸುವುದು, ಸರ್ಜಾಪುರ ರಸ್ತೆ – ಹೊಸೂರು ರಸ್ತೆಗಳ ನಡುವೆ ರಸ್ತೆ ನಿರ್ಮಾಣಕ್ಕೆ ಸರ್ಕಾರದ ಆದೇಶ ಸಂಖ್ಯೆ : ಯುಡಿಎ 196 ಟಿಎಲ್ಎ2004 ದಿನಾಂಕ 23.12.2004ರಂತೆ ಯೋಜನೆಯನ್ನು ಜಾರಿಗೊಳಿಸುವುದಕ್ಕೆ ಏಕಕಾಲಿಕ ಕ್ರಮ ಎಂಬಂತೆ ಇಂತಹ ವಿಶೇಷ

ಯೋಜನೆಗಾಗಿ ತಿದ್ದುಪಡಿ ಮಾಡುವುದು ಅವಶ್ಯಕವಾಗಿದೆ. ಆದುದರಿಂದ, ಈ ವಿಧೇಯಕಕ್ಕೆ ತಿದ್ದುಪಡಿ ತರುತ್ತಿದ್ದೇವೆ.

ಅಧ್ಯಕ್ಷರು : ಪ್ರಸ್ತಾವ ಏನೆಂದರೆ, "2005ರ ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ (ಎರಡನೇ ತಿದ್ದುಪಡಿ) ವಿಧೇಯಕವನ್ನು ಪರ್ಯಾಲೋಚಿಸುವುದು"

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು

ಖಂಡ ಖಂಡವಾಗಿ ವಿಧೇಯಕವನ್ನು ಪರ್ಯಾಲೋಚಿಸುವುದು

ಖಂಡ 2

ಪ್ರಸ್ತಾವ ಏನೆಂದರೆ

ಅಧ್ಯಕ್ಷರು : "ಖಂಡ 2 ಈ ವಿಧೇಯಕದ ಅಂಗವಾಗಿರುತ್ತದೆ"

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು

(ಖಂಡ 2 ಅನ್ನು ವಿಧೇಯಕಕ್ಕೆ ಸೇರಿಸಲ್ಪಟ್ಟಿತು)

ಖಂಡ 1 ಇತ್ಯಾದಿ

ಅಧ್ಯಕ್ಷರು : ಪ್ರಸ್ತಾವ ಏನೆಂದರೆ :

"ಮೊದಲನೆಯ ಖಂಡ ದೀರ್ಘ ಶೀರ್ಷಿಕೆ, ಪ್ರಸ್ತಾವನೆ ಹಾಗೂ ಅಧಿನಿಯಮಗೊಳಿಸುವ ಸೂತ್ರ ಸಂಹಿತೆ ವಿಧೇಯಕದ ಭಾಗವಾಗಿರುತ್ತದೆ"

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು

(ಮೊದಲನೆಯ ಖಂಡ ದೀರ್ಘ ಶೀರ್ಷಿಕೆ ಪ್ರಸ್ತಾವನೆ ಹಾಗೂ ಅಧಿನಿಯಮಗೊಳಿಸುವ ಸೂತ್ರ ಸಂಹಿತೆಗಳನ್ನು ವಿಧೇಯಕಕ್ಕೆ ಸೇರಿಸಲ್ಪಟ್ಟಿತು).

ಪ್ರಸ್ತಾವದ ಅಂಗೀಕಾರ

ಶ್ರೀ ಹೆಚ್.ಡಿ. ಕುಮಾರಸ್ವಾಮಿ (ಮುಖ್ಯಮಂತ್ರಿಗಳು) : ಮಾನ್ಯ ಅಧ್ಯಕ್ಷರೆ, "2005ರ ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ (ಎರಡನೇ ತಿದ್ದುಪಡಿ) ವಿಧೇಯಕವನ್ನು ಅಂಗೀಕರಿಸಬೇಕೆಂದು ಕೋರುತ್ತೇನೆ."

ಅಧ್ಯಕ್ಷರು : ಪ್ರಸ್ತಾವ ಏನೆಂದರೆ, "2005ರ ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ (ಎರಡನೇ ತಿದ್ದುಪಡಿ) ವಿಧೇಯಕವನ್ನು ಅಂಗೀಕರಿಸುವುದು"

*** ಪ್ರಸ್ತಾವ ಅಂಗೀಕರಿಸಲ್ಪಟ್ಟಿತು ಮತ್ತು ವಿಧೇಯಕಕ್ಕೆ ಒಪ್ಪಿಗೆ ನೀಡಲಾಯಿತು**

(ಅನುಬಂಧ –III)

ಈ) ಕರ್ನಾಟಕ ಪ್ರೌಢ ಶಿಕ್ಷಣ ಪರೀಕ್ಷಾ ಮಂಡಳಿ (ತಿದ್ದುಪಡಿ) ವಿಧೇಯಕ, 2006

ಪರ್ಯಾಲೋಚನಾ ಪ್ರಸ್ತಾವ